**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. :33 ಪ್ರಾ.ಸಾ. : 16**

| | |
|---|---|
| ಸಾಕ್ಷಿಯ ಹೆಸರು | : ಅಣ್ಣಪ್ಪ ಈಸ್ರ ನಾಯ್ಕ |
| ತಂದೆಯ ಹೆಸರು | : ಈಸ್ರ ನಾಯ್ಕ |
| ವಯಸ್ಸು | : 40 ವರ್ಷ |
| ಉದ್ಯೋಗ | : ರೈತಾಪಿ |
| ವಾಸ | : ಖಾನಗೋಡ |

**ದಿನಾಂಕಃ 16-02-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನಾನು ಹುಟ್ಟಿದಾಗಿನಿಂದ ಖಾನಗೋಡುದಲ್ಲಿ ವಾಸವಿದ್ದೇನೆ. ನನಗೆ ನ್ಯಾಯಾಲಯದ ಮುಂದಿರು ಆರೋಪಿಯ ಪರಿಚಯ ಇದೆ. ಆರೋಪಿ ಹಿಂದೆ ನಮ್ಮ ಗ್ರಾಮ ಪಂಚಾಯತಿಯ ಅಧ್ಯಕ್ಷ ಆಗಿದ್ದ. ಆ ಸಮಯದಲ್ಲಿ ನಮ್ಮ ಗ್ರಾಮದಲ್ಲಿ ಶೌಚಾಲಯ ನಿರ್ಮಿಸಲು ಸರ್ಕಾರದಿಂದ ಸಹಾಯ ಧನ ಕೊಟ್ಟ ವಿಚಾರ ಕೇಳಿದ್ದೇನೆ ಆದರೆ ನನಗೆ ಯಾವುದೇ ಸಹಾಯಧನ ಕೊಟ್ಟಿರುವುದಿಲ್ಲ . ಫಲಾನುಭವಿಗಳಿಗೆ ಎಷ್ಟು ಸಹಾಯಧನ ಕೊಟ್ಟರು ಎಂದರೆ ನನಗೆ ಗೊತ್ತಿಲ್ಲ. ನನ್ನನ್ನು ಸದರಿ ಯೋಜನೆಯಡಿಯಲ್ಲಿ ಫಲಾನುಭವಿಯಾಗಿ ಆಯ್ಕೆ ಮಾಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಪೊಲೀಸ್ ನವರು ನನ್ನನ್ನು ವಿಚಾರಣೆ ಮಾಡಿಲ್ಲ. ನ್ಯಾಯಾಲಯದಿಂದ ಸಮನ್ಸ್ ಬಂದ ಮೇಲೆ ಈ ಪ್ರಕರಣದ ಬಗ್ಗೆ ಗೊತ್ತಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದ**

2. ನಾನು ಗ್ರಾಮ ಸ್ವಚ್ಚತಾ ಯೋಜನೆಯಲ್ಲಿಯಲ್ಲಿ ಶೌಚಾಲಯ ನಿರ್ಮಾಣ ಮಾಡಿಕೊಳ್ಳಲು ಫಲಾನುಭವಿಯಾಗಿದ್ದೆ ಎಂದರೆ ನನಗೆ ಗೊತ್ತಿಲ್ಲ. ನನಗೆ ಸಹಾಯ ಧನ

ರೂ.3000/- ಬರಬೇಕಾಗಿತ್ತು ಎಂದರೆ ನನಗೆ ಗೊತ್ತಿಲ್ಲ. ನಾನು ಈ ಬಗ್ಗೆ ನಿಪಿ-52 ರಂತೆ ತನಿಖಾಧಿಕಾರಿಗೆ ಹೇಳಿಕೆ ಕೊಟ್ಟಿದ್ದೆನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದ**

ಏನೂ ಇಲ್ಲ ಎಂದು ಹೇಳಿದ್ದಾರೆ.

**ಮರು ವಿಚಾರಣೆಃ – ಇಲ್ಲ –**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ